ದಿನಾಂಕ: 14.06.2022 ರಂದು ಬೆಳಗ್ಗೆ 11.00 ಗಂಟೆಗೆ ರಾಜಾಜಿನಗರ ವಾರ್ಡ್ ನಂ. 99 ರಲ್ಲಿ ಶ್ರೀ ಹೆಚ್.ವಿ. ಅಶ್ವತ್ಥ್, ನೋಡಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಗಳ ವಿವರ:-

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು ಹಾಗೂ ವಾರ್ಡ್ ಕಮಿಟಿ ಸದಸ್ಯರು:-**

1. ಶ್ರೀ ಹೆಚ್.ವಿ. ಅಶ್ವತ್ಥ, ನೋಡಲ್ ಅಧಿಕಾರಿಗಳು
2. ಶ್ರೀ ಸುಭಾಸ್ ಪಾಟೀಲ್, ಸಹಾಯಕ ಅಭಿಯಂತರರು, ವಾರ್ಡ್ ನಂ. 99
3. ಶ್ರೀ ಮಲ್ಲಿಕಾರ್ಜು, ಎಂ.ಆರ್. ಬಿ.ಡಬ್ಲ್ಯೂ.ಎಸ್.ಎಸ್.ಬಿ.
4. ಶ್ರೀಮತಿ ದಿವ್ಯ, ಹಿರಿಯ ಆರೋಗ್ಯ ನಿರೀಕ್ಷಕರು
5. ಶ್ರೀ ಜಿ.ಸಿ. ಲೋಕೇಶ್, ಅಸೆಸರ್
6. ಶ್ರೀ ಶಿವರಾಮಯ್ಯ, ಅರಣ್ಯ ಇಲಾಖೆ
7. ಶ್ರೀ ಶ್ರೀನಾಥ್, ಅರಣ್ಯ ಇಲಾಖೆ
8. ಶ್ರೀ ರಾಜಣ್ಣ, ಸದಸ್ಯರು
9. ಶ್ರೀ ಸುರೇಶ್ ಗಡುಗೋಳಿ
10. ಶ್ರೀ ಶ್ರೀನಿವಾಸ್, ಸದಸ್ಯರು
11. ಶ್ರೀ ಆನಂದ್, ಸದಸ್ಯರು
12. ಶ್ರೀ ರಮೇಶ್, ಮಾರ್ಷಲ್

ದಿನಾಂಕ: 14.06.2022 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ. 99 ರಾಜಾಜಿನಗರದ ಡಾ: ಅಬ್ದುಲ್ ಕಲಾಂ, ಸಭಾಂಗಣದಲ್ಲಿ ಪಾಲಿಕೆ ಅಧಿಕಾರಿಗಳೊಂದಿಗೆ ಸಭೆಯನ್ನು ಕೈಗೊಂಡು ಈ ಕೆಳಗಿನ ವಿಷಯಗಳನ್ನು ಚರ್ಚಿಸಲಾಯಿತು.

1. ವಾರ್ಡ್ ಕಮಿಟಿ ಸಭೆಯಲ್ಲಿ ವಾರ್ಡಿನ ಸಿಲ್ಪ್ ಅಂಡ್ ಟ್ರಾಕ್ಟರ್ ಕಾಮಗಾರಿ ನಿರ್ವಹಿಸುತ್ತಿದೆಯೆ ಎಂದು ನೋಡಲ್ ಅಧಿಕಾರಿಗಳು ವಾರ್ಡ್ ಕಮಿಟಿ ಸದಸ್ಯರಿಗೆ ಕೇಳಿದರು. ಇದಕ್ಕೆ ಉತ್ತರವಾಗಿ ವಾರ್ಡ್ ಕಮಿಟಿ ಸದಸ್ಯರು ವಾರ್ಡಿನಲ್ಲಿ ಸಿಲ್ಪ್ ಅಂಡ್ ಟ್ರಾಕ್ಟರ್ ಯಶಸ್ವಿಯಾಗಿ ನಿರ್ವಹಿಸಲಾಗುತ್ತಿದೆ ಎಂದು ತಿಳಿಸಿದರು.
2. ನೋಡಲ್ ಅಧಿಕಾರಿಗಳು ಕೊರೋನ ವೈರಸ್ ವ್ಯಾಕ್ಸಿನೇಷನ್ 60 ವರ್ಷ ಮೇಲ್ಪಟ್ಟವರಿಗೆ ಹಾಕಿಸುವಂತೆ ಆರೋಗ್ಯ ಇಲಾಖಾ ಅಧಿಕಾರಿಗಳಿಗೆ ತಿಳಿಸಿದರು.
3. ಆರೋಗ್ಯ ಇಲಾಖಾ ಅಧಿಕಾರಿಗಳು ವ್ಯಾಪ್ತಿಯಲ್ಲಿ ಡೆಂಗ್ಯೂ ಜ್ವರ ಹೆಚ್ಚಾಗುತ್ತಿದ್ದು, ಸ್ವಚ್ಚತೆಯನ್ನು ಕಾಪಾಡಿಕೊಳ್ಳುವಂತೆ ಸಭೆಗೆ ತಿಳಿಸಿದರು.
4. ಶ್ರೀ ಆನಂದ್, ಸದಸ್ಯರು, ಕೆ.ಎಫ್.ಸಿ. ಹಿಂಭಾಗ ಚರಂಡಿ ತೆಗೆದಿರುವ ಬಗ್ಗೆ ಸಭೆಯ ಗಮನಕ್ಕೆ ತಂದರು, ಇದಕ್ಕೆ ಉತ್ತರವಾಗಿ ನೋಡಲ್ ಅಧಿಕಾರಿಗಳು ಕಾಮಗಾರಿ ಕೆಲಸವನ್ನು ಬೇಗ ಮುಗಿಸಿ, ಚರಂಡಿಯನ್ನು ಮುಚ್ಚುವಂತೆ ವಾರ್ಡ್ ಅಭಿಯಂತರರಿಗೆ ತಿಳಿಸಿದರು.
5. ನೋಡಲ್ ಅಧಿಕಾರಿಗಳು ವಾರ್ಡ್ ವ್ಯಾಪ್ತಿಯಲ್ಲಿ ಮಂಜುನಾಥನಗರದ ರಸ್ತೆಗಳಲ್ಲಿ ನಡೆಯುತ್ತಿರುವ ಕಾಮಗಾರಿಗಳ ಗುಣಮಟ್ಟವನ್ನು ಕಾಯ್ದುಕೊಂಡು ಕಾಮಗಾರಿಯನ್ನು ಬೇಗನೆ ಮುಗಿಸಿ, ಸಾರ್ವಜನಿಕರಿಗೆ ತೊಂದರೆಯಾಗದಂತೆ ನಿರ್ವಹಿಸಲು ವಾರ್ಡ್ ಅಭಿಯಂತರರಿಗೆ ಸೂಚಿಸಿದರು.
6. ವಾರ್ಡ್ ಸದಸ್ಯರು ಶ್ರೀ ಸುರೇಶ್ ಹಾಗೂ ಇತರೆ ಸದಸ್ಯರು ಮಂಜುನಾಥನಗರ 1ನೇ ಮುಖ್ಯ ರಸ್ತೆಯ ಡಾಂಬರೀಕರಣ ಯಾವಾಗ ಕೈಗೊಳ್ಳುತ್ತೀರೆಂದು ವಾರ್ಡ್ ಅಭಿಯಂತರರಿಗೆ ಕೇಳಿದರು. ಇದಕ್ಕೆ ಉತ್ತರವಾಗಿ ವಾರ್ಡ್ ಅಭಿಯಂತರರು ಮಂಜುನಾಥನಗರ ಮುಖ್ಯ ರಸ್ತೆ, ವಾರ್ಡ್ ನಂ. 107ರ ವ್ಯಾಪ್ತಿಗೆ ಒಳಪಡುತ್ತದೆ ಎಂದು ತಿಳಿಸುತ್ತಾ, ಆದಷ್ಟು ಬೇಗನೆ ಕಾಮಗಾರಿಯನ್ನು ಉಪವಿಭಾಗ ವ್ಯಾಪ್ತಿಯಿಂದ ಮುಗಿಸಿಕೊಡಬೇಕೆಂದು ಸಭೆಗೆ ತಿಳಿಸಿದರು.
7. ವಾರ್ಡ್ ಸದಸ್ಯರು ರಾಜಾಜಿನಗರ 2ನೇ ಬ್ಲಾಕ್‌ನಲ್ಲಿ ಡಾಂಬರೀಕರಣ ಕಾಮಗಾರಿಯನ್ನು ಆದಷ್ಟು ಬೇಗನೆ ಕೈಗೊಳ್ಳಬೇಕೆಂದು ಸಭೆಗೆ ಕೋರಿದರು. ಇದಕ್ಕೆ ಉತ್ತರವಾಗಿ ನೋಡಲು ಅಧಿಕಾರಿಗಳು ವಾರ್ಡ್ ಅಭಿಯಂತರರಿಗೆ ಆದಷ್ಟು ಬೇಗನೆ ಮುಗಿಸಿ, ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ಸೂಚಿಸಿದರು.

ಪು.ತಿ.ನೋ.

8. ನೋಡಲ್ ಅಧಿಕಾರಿಗಳು ವಾರ್ಡ್ ರಸ್ತೆಗಳಲ್ಲಿ ಒಣಗಿರುವ ಮರದ ಕೊಂಬೆಗಳನ್ನು ಸಿಲ್ಪ್ ಅಂಡ್ ಟ್ರಾಕ್ಟರ್ ಮೂಲಕ ತೆರವುಗೊಳಿಸಲು ವಾರ್ಡ್ ಅಭಿಯಂತರರಿಗೆ ಸೂಚಿಸಿದರು.
9. ಇ.ಎಸ್.ಐ. ಆಸ್ಪತ್ರೆ ಹತ್ತಿರವಿರುವ ಶೌಚಾಲಯದ ಪಕ್ಕ ಬಿದ್ದಿರುವ ಕಸ ಹಾಗೂ ಡೆಬ್ರಿಸನ್ನು ತೆರವುಗೊಳಿಸಬೇಕೆಂದು ವಾರ್ಡ್ ಸದಸ್ಯರು ಸಭೆಗೆ ಕೋರಿದರು. ಇದಕ್ಕೆ ನೋಡಲ್ ಅಧಿಕಾರಿಗಳು ಸಂಬಂಧಿಸಿದ ಇಲಾಖೆಯವರು ಕ್ರಮ ಕೈಗೊಳ್ಳಬೇಕೆಂದು ಸೂಚಿಸಿದರು.
10. ನೋಡಲ್ ಅಧಿಕಾರಿಗಳು ಕಂದಾಯ ವಸೂಲಿ ಪ್ರಗತಿಯ ಬಗ್ಗೆ ಸಭೆಯಲ್ಲಿ ಪ್ರಸ್ತಾಪಿಸಿದರು.

ಸದಸ್ಯ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಮಾನ್ಯ ಅಧ್ಯಕ್ಷರಿಗೆ ವಾರ್ಡ್ ಸಮಿತಿ ಸದಸ್ಯರುಗಳಿಗೆ ಮತ್ತು ವಿವಿಧ ಇಲಾಖೆಯ ಅಧಿಕಾರಿಗಳಿಗೆ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ವಾರ್ಡ್ ಸಮಿತಿ
ವಾರ್ಡ್ ನಂ. 99